## ಕೊರೋನಾ ಸಂಕಷ್ಟದಲ್ಲಿರುವವರಿಗೆ ಮುರುಘಾಮಠದಿಂದ ದವಸ-ಧಾನ್ಯ ವಿತರಣೆ

**ಚಿತ್ರದುರ್ಗ, ಮೇ 22** - ಕೊರೋನಾ ಹಿನ್ನಲೆಯಲ್ಲಿ ದುಡಿಮೆಯಿಲ್ಲದೆ ಸಂಕಷ್ಟಕ್ಕೀಡಾಗಿರುವ ಕಡುಬಡವರಿಗೆ, ನಿರ್ಗತಿಕರಿಗೆ, ವಿವಿಧ ಸಮಾಜದ ಬಡತನ ರೇಖೆಗಿಂತ ಕಡಿಮೆ ಇರುವ ಜನರಿಗೆ ಉಚಿತ ಆಹಾರ ಕಿಟ್ ವಿತರಣೆಯನ್ನು ಶ್ರೀ ಜಗದ್ಗುರು ಮುರುಘರಾಜೇಂದ್ರ ಮಠದಿಂದ ಆರಂಭಿಸಲಾಯಿತು.

ಇಂದು ಡಾ. ಶಿವಮೂರ್ತಿ ಮುರುಘಾ ಶರಣರು ಸವಿತಾ ಸಮಾಜದ ಬಡವರಿಗೆ ಅಕ್ಕಿ, ಬೇಳೆ ಮತ್ತು ಗೋಧಿಹಿಟ್ಟು ಆಹಾರದ ಕಿಟ್‌ಗಳನ್ನು ವಿತರಿಸುವುದರ ಮೂಲಕ ಚಾಲನೆ ನೀಡಿದರು. ಬಡವರನ್ನು ಶ್ರೀಮಠದಿಂದ ಗುರುತಿಸಿ ಪ್ರತಿದಿನ ನೂರು ಜನರಿಗೆ ಆಹಾರ ಕಿಟ್‌ಗಳನ್ನು ವಿತರಣೆ ಮಾಡಲಾಗುವುದು ಎಂದು ಶ್ರೀಗಳು ತಿಳಿಸಿದರು. ಈ ಸಂದರ್ಭದಲ್ಲಿ ಎಸ್.ಜೆ.ಎಂ. ವಿದ್ಯಾಪೀಠದ ಕಾರ್ಯದರ್ಶಿ ಎ.ಜೆ.ಪರಮಶಿವಯ್ಯ, ವಿದ್ಯಾಪೀಠ ಆಡಳಿತ ಮಂಡಳಿ ಸದಸ್ಯ ಎಂ.ಟಿ. ಮಲ್ಲಿಕಾರ್ಜುನಸ್ವಾಮಿ, ಸವಿತಾ ಸಮಾಜದ ಅಧ್ಯಕ್ಷ ಶ್ರೀನಿವಾಸ್, ಹಾಲಪ್ಪನಾಯಕ, ಬಸವರಾಜ ಗಡ್ಡೆಪ್ಪನವರ ಇದ್ದರು.







